ಆಂದೋಲನ

# ರಾಜ್ಯ ಮಟ್ಟದ ಕುಸ್ತಿ ಪಂದ್ಯ: ಕೆ.ವಿ.ವಿಖ್ಯಾತ್‌ಗೆ ಚಿನ್ನದ ಪದಕ



ಮೈಸೂರು: ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವತಿಯಿಂದ ಬೆಂಗಳೂರಿನ ಗ್ಲೋಬಲ್ ಅಕಾಡೆಮಿ ಆಫ್ ಟೆಕ್ನಾಲಜಿ ಕಾಲೇಜಿನಲ್ಲಿ ಇತ್ತೀಚೆಗೆ ನಡೆದ ರಾಜ್ಯ ಮಟ್ಟದ ಕುಸ್ತಿ ಚಾಂಪಿಯನ್‌ಶಿಪ್-2024ರಲ್ಲಿ ಮೈಸೂರಿನ ಬನ್ನೂರು ರಸ್ತೆಯಲ್ಲಿರುವ ಎಟಿಎಂಇ ಇಂಜಿನಿಯರಿಂಗ್ ಕಾಲೇಜಿನ ಇಲೆಕ್ಟ್ರಿಕಲ್-ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ವಿಭಾಗದ 5ನೇ ಸೆಮಿಸ್ಟರ್‌ನ ವಿದ್ಯಾರ್ಥಿ ಕೆ.ವಿ.ವಿಖ್ಯಾತ್ ಚಿನ್ನದ ಪದಕ ಗಳಿಸಿದ್ದಾರೆ.

ಸಾಧನೆಗೈದ ಕೆ.ವಿ.ವಿಖ್ಯಾತ್ ಅನ್ನು ಎಟಿಎಂಇ ಆಡಳಿತಾಧಿಕಾರಿ ಡಾ.ಸಚ್ಚಿದಾನಂದಮೂರ್ತಿ, ಪ್ರಾಂಶುಪಾಲ ಡಾ.ಎಲ್.ಬಸವರಾಜ್, ದೈಹಿಕ ಶಿಕ್ಷಣ ನಿರ್ದೇಶಕ ಡಾ.ಎಂ.ಪಿ.ಮುರಳೀಧರ್ ಮತ್ತು ಸಿಬ್ಬಂದಿ ಅಭಿನಂದಿಸಿದ್ದಾರೆ.

Main Edition
Dec 4, 2024 Page No. 5
Powered by: erelego.com